# ಸಹಕಾರ ಸಂಘಗಳ ನಿಬಂಧಕರ ಕಛೇರಿ, ಕರ್ನಾಟಕ ರಾಜ್ಯ,

ನಂ. 1, ಅಲಿ ಅಸ್ಕರ್ ರಸ್ತೆ, ಬೆಂಗಳೂರು

ಸಂಖ್ಯೆ : ಆರ್‌ಎಸ್‌ಆರ್/ಸೌಕಾ/164/ಎಕ್ಸ್ ಎಂಸಿ/2003-04

ದಿನಾಂಕ : 6-12-2003

ಗೆ,
ವ್ಯವಸ್ಥಾಪಕ ನಿರ್ದೇಶಕರು,
ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳು

ಮಾನ್ಯರೇ,

ವಿಷಯ : **ಡಿಸಿಸಿ ಬ್ಯಾಂಕುಗಳ ಸದಸ್ಯತ್ವಕ್ಕೆ ಹಾಗೂ ಸೌಲಭ್ಯಗಳಿಗೆ ಸಂಬಂಧಿಸಿದಂತೆ ಸ್ಪಷ್ಟೀಕರಣ ಕೋರಿ**
ಉಲ್ಲೇಖ : **ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ, ಬೆಂಗಳೂರು ಇವರ ಪತ್ರ ಸಂಖ್ಯೆ : 2/17/2003-04 ದಿನಾಂಕ 3-10-2003**

ವಿಷಯಕ್ಕೆ ಸಂಬಂಧಿಸಿದಂತೆ ದಿನಾಂಕ 1-1-2001ರಿಂದ ಜಾರಿಗೆ ತಂದ ಕರ್ನಾಟಕ ಸೌಹಾರ್ದ ಸಹಕಾರಿ ಕಾಯ್ದೆ 1997ರಡಿ ನೋಂದಣಿಯಾದ ಸಹಕಾರಿಗಳಿಗೆ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳು, ಸದಸ್ಯತ್ವ ನೀಡಲು ನಿರಾಕರಿಸುತ್ತಿರುವ ಬಗ್ಗೆ ಉಲ್ಲೇಖದ ಪತ್ರದಲ್ಲಿ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿಯು ಈ ಕಛೇರಿಯ ಗಮನಕ್ಕೆ ತಂದು ಈ ಕುರಿತು ಗೊಂದಲ ನಿವಾರಿಸಲು ಕೋರಿರುತ್ತದೆ.

ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959ರ ಕಲಂ 16(1)(ಇ) ನಂತೆ ಜಾರಿಯಲ್ಲಿರುವ ಯಾವುದೇ ಕಾನೂನಿನಡಿಯಲ್ಲಿ ರಚಿತವಾದ ಒಂದು ಸಂಸ್ಥೆ ಸಹಕಾರ ಸಂಘದಲ್ಲಿ ಸದಸ್ಯತ್ವ ಪಡೆಯಬಹುದಾಗಿದ್ದು, ಈ ಅನ್ವಯ ಸೌಹಾರ್ದ ಸಹಕಾರಿಗಳಿಗೆ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕುಗಳಲ್ಲಿ ಸದಸ್ಯತ್ವ ನೀಡಬಹುದಾಗಿದೆ ಎಂದು ಸ್ಪಷ್ಟೀಕರಿಸಲಾಗಿದೆ. ಈ ಸಹಕಾರಿಗಳಿಗೆ ಸಾಲ ಮತ್ತಿತರೆ ಸೌಲಭ್ಯಗಳನ್ನು ನೀಡುವ ಬಗ್ಗೆ ಆಯಾ ಜಿಲ್ಲಾ ಬ್ಯಾಂಕುಗಳ, ಆಡಳಿತ ಮಂಡಳಿಗಳು ಚಾಲ್ತಿಯಲ್ಲಿರುವ ನಬಾರ್ಡ ಮತ್ತು ಆರ್.ಬಿ.ಐ. ರವರು ನೀಡಿರುವ ಸೂಚನೆಗಳಂತೆ ನಿರ್ಣಯಿಸಿ ಅರ್ಹ ಮುಂದಿನ ಕ್ರಮವಿಡಬಹುದಾಗಿದೆಯೆಂದು ಈ ಮೂಲಕ ತಿಳಿಸಲಾಗಿದೆ.

ತಮ್ಮ ವಿಶ್ವಾಸಿ

ಸಹಿ/-
ಸಹಕಾರಿಗಳ ಸಂಯುಕ್ತ ನಿಬಂಧಕರು
(ಕೇಂದ್ರ ಸ್ಥಾನ)